ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**

**ಸೆಷನ್ಸ್‌ಕೇಸ್ ನಂಬರ್ : 66/2024**

**ಫ್ರಾಸಾ- 1 ಚಾಸಾ- 3**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಕಾರ್ತೀಕ್ |
| ತಂದೆಯ ಹೆಸರುಃ | : | ರಾಜು |
| ವಯಸ್ಸುಃ | : | 28 ವರ್ಷ |
| ಉದ್ಯೋಗಃ | : | ಟೀ ಕ್ಯಾಂಟೀನ್ ವ್ಯಾಪಾರ |
| ವಾಸ | : | ಹೊಳೆನರಸೀಪುರ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:22-09-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಈಗ ತೋರಿಸಿದ ದಾಖಲೆಯಲ್ಲಿರುವ ರುಜು ನನ್ನದೆ. ದಾಖಲೆಯನ್ನು ನಿಪಿ-1 ಎಂದು ಸಾಕ್ಷಿಯ ರುಜುವನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಈ ಸಹಿಯನ್ನು ಹೊಳೆನರಸೀಪುರ ನಗರ ಪಿ ಎಸ್ ನಲ್ಲಿ ಹಾಕಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ನನ್ನನ್ನು ಈಕೇಸಿಗೆ ಸಂಬಂಧಪಟ್ಟಂತೆ ಕಡವಿನಕೊಟೆಗೆ ಹೋಗುವ ಬೈಪಾಸ್ ರಸ್ತೆಗೆ ಕರೆಸಿಲ್ಲ. ಅಲ್ಲಿ ಯಾವುದೇ ಮಹಜರು ನಡೆಸಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತು ವಶಪಡಿಸಿಕೊಂಡಿಲ್ಲ. ನನ್ನ ಸಮಕ್ಷಮ ಯಾವುದೇ ದೊಣ್ಣೆ ವಶಪಡಿಸಿಕೊಂಡಿಲ್ಲ. ಆ ದೊಣ್ಣೆ ನೋಡಿದರೆ ಗುರುತಿಸಲಾಗುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ದಿನಾಕ 2-1-2022ರಂದು ಮಧ್ಯಾಹ್ನ 1-00 ಗಂಟೆ ಸಮಯದಲ್ಲಿ ನನ್ನನ್ನು ಹೊಳೆನರಸೀಪುರ ಟೌನ್ ನ ಆರ್ ಆರ್ ಆರ್ ಡಾಬಾದ ಸಮೀಪ ಕಡವಿನಕೊಟೆ ಕಡೆಗೆ ಹೋಗುವ

ಬೈಪಾಸ್ ರಸ್ತೆಗೆ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕರೆಸಿದ್ದರು ಎಂದರೆ ಸರಿಯಲ್ಲ. ಹಾಜರಿದ್ದ ಚಾಸಾ-1 ರವರು ತನಗೆ ಹಲ್ಲೆ ಮಾಡಿದ್ದು ಇದೇ ಸ್ಥಳದಲ್ಲಿ ಎಂದು ತೋರಿಸಿದ ಮೇರೆಗೆ ಹಾಗೂ ತನಗೆ ಹಲ್ಲೆ ಮಾಡಲು ಬಳಸಿದ್ದ ದೊಣ್ಣೆ ಇದೇ ಎಂದು ಒಂದು ದೊಣ್ಣೆಯನ್ನು ಹಾಜರುಪಡಿಸಿದ ಮೇರೆಗೆ ಪೊಲೀಸರು ಅದನ್ನು ವಶಪಡಿಸಿಕೊಂಡು ನಿಪಿ-1 ರಂತೆ ಮಹಜರು ಬರೆದು ನನ್ನ ಸಹಿಯನ್ನು ಸ್ಥಳದಲ್ಲಿ ಪಡೆದರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**